**<u>ದಿಃ 29-02-2024 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ :</u>** ಅರ್ಜಿದಾರರ ಪರ ವಕೀಲರಿಂದಃ

ನನ್ನ ತಾಯಿಗೆ ನಾನೊಬ್ಬನೇ ಮಗ ಇರುತ್ತೇನೆ. ನನ್ನ ಮುಖ್ಯ ವಿಚಾರಣೆ ಸಲುವಾಗಿ ಪ್ರಮಾಣ ಪತ್ರವನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿದ್ದು ಅದರಲ್ಲಿರುವ ಎಲ್ಲಾ ಅಂಶಗಳು ಸತ್ಯದಿಂದ ಕೂಡಿದ್ದು ಅದನ್ನು ನನ್ನ ಸೂಚನೆಯ ಮೇರೆಗೆ ತಯಾರಿಸಲಾಗಿರುತ್ತದೆ ಮತ್ತು ನಾನು ಅದಕ್ಕೆ ಓದಿ ತಿಳಿದುಕೊಂಡು ಸಹಿ ಮಾಡಿರುತ್ತೇನೆ, ಹಾಗೂ ಮಾನ್ಯ ನ್ಯಾಯಾಲಯದ ಅವಗಾಹನೆಗಾಗಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸಿರುತ್ತೇನೆ.

ಅಲಭ್ಯ ಪ್ರಮಾಣ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಚುನಾವಣೆಯ ಗುರುತಿನ ಚೀಟಿ ನೋಟರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎರಡು ಪತ್ರಿಕಾ ಪ್ರಕಟಣಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ಮತ್ತು ನಿಪಿ-4 ಎಂದು ಗುರುತಿಸಲಾಯಿತು.

ಆದ್ದರಿಂದ ಅರ್ಜಿಯಲ್ಲಿ ಕೇಳಿದಂತೆ ಎದುರುದಾರರಿಗೆ ನನ್ನ ತಾಯಿಯ ಮರಣ ಪ್ರಮಾಣ ಪತ್ರವನ್ನು ನೀಡಲು ಆದೇಶ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀಸವಾಲುಃ** ಎದುರುದಾರರು ಏಕತರ್ಪಿ ಇರುತ್ತಾರೆ , ಕಾರಣ ಪಾಟೀಸವಾಲು ಇಲ್ಲವೆಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**2 ನೇ ಹೆಚ್ಚುವರಿ ಪ್ರ.ದ.ನ್ಯಾ.ದಂ.ಗಳು, ಕಲಬುರಗಿ**